**Akashvani : Bangalore**
**Regional Bulletin In Kannada**
**21.12.2024 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**21.12.2024 / 18.40  hrs**
**<><*<><>*><>**

**ಮುಖ್ಯಾಂಶಗಳು**

**೧. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ; ವಿಚಾರಗೋಷ್ಠಿಯಲ್ಲಿ ಸಾಹಿತ್ಯಾಸಕ್ತರು ಭಾಗಿ**

**೨. ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ಶತಮಾನೋತ್ಸವ ; ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಪೂರ್ವಾಭಾವಿ ಸಭೆ**

**೩. ಬಿಬಿಎಂಪಿ ಮುಖ್ಯ ಆಯುಕ್ತರಿಂದ ಬೆಂಗಳೂರಿನ ವಿವಿಧೆಡೆ ಮತದಾರರ ಪಟ್ಟಿ ಪರಿಷ್ಕರಣೆ**

**೪. ಶರಾವತಿ ಜಲಾಶಯದಿಂದ ಶುದ್ಧ ಕುಡಿಯುವ ನೀರು ಒದಗಿಸುವ ಯೋಜನೆಗೆ ಶೀಘ್ರ ಚಾಲನೆ - ಸಚಿವ ಮಧು ಬಂಗಾರಪ್ಪ**

**<><*<><>*><>**

೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಎರಡನೇ ದಿನವಾದ ಇಂದು ವಿಚಾರಗೋಷ್ಠಿಗಳು ಗಮನಸೆಳೆದವು. ಪ್ರಧಾನ ವೇದಿಕೆ ಹಾಗೂ ಎರಡು ಸಮನಾಂತರ ವೇದಿಕೆಗಳಿಂದ ತಲಾ ಐದರಂತೆ ಒಟ್ಟು ೧೫ ಗೋಷ್ಠಿಗಳು ನಡೆದವು. ಸಚಿವ ಎಚ್.ಕೆ.ಪಾಟೀಲ್ ಅಧ್ಯಕ್ಷತೆಯಲ್ಲಿ 'ಸಾಹಿತ್ಯದಲ್ಲಿ ರಾಜಕೀಯ: ರಾಜಕೀಯದಲ್ಲಿ ಸಾಹಿತ್ಯ' ಗೋಷ್ಠಿ ಗಮನ ಸೆಳೆದರೆ, ನೆಲ, ಜಲ ಸಾಕ್ಷರತೆ: ಆತ್ಮಾವಲೋಕನ, ಕರ್ನಾಟಕ: ೫೦ ಹಿನ್ನೋಟ- ಮುನ್ನೋಟ, ಮಂಡ್ಯ ನೆಲಮೂಲದ ಮೊದಲುಗಳು ಕರ್ನಾಟಕದ ಮೌಖಿಕ ಪರಂಪರೆಗಳ ಪ್ರದರ್ಶನ ಮತ್ತು ವಿವರಣೆ ಎಂಬ ಗೋಷ್ಠಿಗಳು ಪ್ರಧಾನ ವೇದಿಕೆ ಜರುಗಿದವು.  ಸಮನಾಂತರ ವೇದಿಕೆ ೧ ರಲ್ಲಿ ಸೃಜನಶೀಲತೆ, ವಿದ್ಯುನ್ಮಾನ ಮಾಧ್ಯಮಗಳ ಸವಾಲುಗಳು, ದಲಿತ ಸಾಹಿತ್ಯದ ನೆಲೆಗಳು, ಕರ್ನಾಟಕ: ಪ್ರಕೃತಿ ವಿಕೋಪದ ಆತಂಕಗಳು, ಶತಮಾನೋತ್ಸವ ವರ್ಷದ ಕನ್ನಡ ಲೇಖಕರು, ಸಮನಾಂತರ ವೇದಿಕೆ ೨ರಲ್ಲಿ ಮಕ್ಕಳ ವ್ಯಕ್ತಿತ್ವ ರೂಪಿಸುವಲ್ಲಿ ಸಾಹಿತ್ಯದ ಪಾತ್ರ, ಕರ್ನಾಟಕದ ಚಿತ್ರಣ ಬದಲಿಸಿದ ಚಳವಳಿಗಳು, ಸಾಹಿತ್ಯ ಪಾತ್ರಗಳ ಮುಖಾಮುಖಿ, ಶತಮಾನ-ರಜತ-ಸುವರ್ಣ ಸಂಭ್ರಮ, ಯುವಜನತೆ ಮತ್ತು ಸಬಲೀಕರಣ ಎಂಬ ಗೋಷ್ಠಿಗಳು ಗಮನ ಸೆಳೆದವು.

ಈ ಕುರಿತು ಹೆಚ್ಚಿನ ಮಾಹಿತಿ ನಮ್ಮ ಜಿಲ್ಲಾ ಪ್ರತಿನಿಧಿಯಿಂದ.

**ಧ್ವನಿ: ಮೋಹನ್ ರಾಜ್, ಮಂಡ್ಯ ಪಿಟಿಸಿ**

**<><*<><>*><>**

ಬೆಳಗಾವಿಯಲ್ಲಿ ೧೯೨೪ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆ ನಿಮ್ಮಿತ್ತವಾಗಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ನಡೆಯಿತು. ಇದೇ ೨೬, ೨೭ರಂದು ಬೆಳಗಾವಿಯಲ್ಲಿ ನಡೆಯಲಿರುವ ಶತಮಾನೋತ್ಸವ ಆಚರಣೆ ಕುರಿತು ಇಂದು ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿತ್ತು. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಪರಮೇಶ್ವರ್, ಸಚಿವ ಎಚ್.ಕೆ.ಪಾಟೀಲ್, ಕೆ.ಜೆ.ಜಾರ್ಜ್, ಕೆ.ಎಚ್.ಮುನಿಯಪ್ಪ, ಬೋಸರಾಜು, ಡಾ. ಎಂ.ಸಿ.ಸುಧಾಕರ್ ಸೇರಿದಂತೆ ಸಂಸತ್ ಸದಸ್ಯರು, ಸಮಿತಿ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

**<><*<><>*><>**

ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಇಂದು ವಿವಿಧ ಮತದಾರರ ಮನೆಗಳಿಗೆ ಭೇಟಿ ನೀಡಿ ಸೂಪರ್ ಚೆಕ್ಕಿಂಗ್ ಕಾರ್ಯ ನಡೆಸಿದರು. ಜಿಲ್ಲಾ ಚುನಾವಣಾಧಿಕಾರಿಗಳು-ಬೆಂಗಳೂರು ವ್ಯಾಪ್ತಿಯ ೨೮ ವಿಧಾನಸಭಾ ಕ್ಷೇತ್ರಗಳಲ್ಲಿ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಅಕ್ಟೋಬರ್ ೨೭ ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿ ಪರಿಷ್ಕರಣೆ ಮಾಡಿರುವುದನ್ನು ಜಿಲ್ಲಾ ಚುನಾವಣಾ ಅಧಿಕಾರಿ, ಅಪರ ಜಿಲ್ಲಾ ಚುನಾವಣಾ ಅಧಿಕಾರಿಗಳು ಕೆಲ ಮನೆಗಳಿಗಿಗೆ ಭೇಟಿ ನೀಡಿ ಮತದಾರರ ಪಟ್ಟಿ ಪರಿಷ್ಕರಣೆ ಮಾಡಿರುವ ಬಗ್ಗೆ ಸೂಪರ್ ಚೆಕ್ಕಿಂಗ್ ಮಾಡಲಾಗುತ್ತದೆ. ಅದರಂತೆ ಇಂದು ಬ್ಯಾಟರಾಯನಪುರ, ಹೆಬ್ಬಾಳ, ವಿಜಯನಗರ ಹಾಗೂ ಗೋವಿಂದರಾಜನಗರ ಸೇರಿದಂತೆ ೪ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**<><*<><>*><>**

ಸೊರಬ ತಾಲೂಕಿನ ಪ್ರತಿ ಮನೆ ಮನೆಗೆ ಶರಾವತಿ ಜಲಾಶಯದಿಂದ ಶುದ್ಧ ಕುಡಿಯುವ ನೀರನ್ನು ಒದಗಿಸುವ ೬೬೦ ಕೋಟಿ ರೂಪಾಯಿ ವೆಚ್ಚದ ಯೋಜನೆಗೆ ಹಾಗೂ ದಂಡಾವತಿ ಯೋಜನೆಗೆ ಪರ್ಯಾಯವಾಗಿ ೯೮೦ ಕೋಟಿ ರೂಪಾಯಿ ವೆಚ್ಚದ ಯೋಜನೆಗಳನ್ನು ಶೀಘ್ರದಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಹೇಳಿದರು. ಸೊರಬ ತಾಲೂಕು ಸಮನವಳ್ಳಿಯ ಸರ್ಕಾರಿ ಶಾಲಾ ಆವರಣದಲ್ಲಿ ಸುಮಾರು ಒಂದು ಸಾವಿರದ ೨೦೦ ಕೋಟಿ ರೂಪಾಯಿ ವೆಚ್ಚದ ೧೭ ಕಟ್ಟಡ ಕಾಮಗಾರಿಗಳ ಲೋಕಾರ್ಪಣೆ ಮತ್ತು ೪೦ ಕೋಟಿ ರೂಪಾಯಿ ವೆಚ್ಚದ ೧೬ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಹಲವು ದಶಕಗಳಿಂದ ಸಾಗುವಳಿ ಮಾಡುತ್ತಿರುವ ಹಾಗೂ ಅರಣ್ಯ ಭೂಮಿಯಲ್ಲಿ ವಾಸವಾಗಿರುವ ವನವಾಸಿಗಳನ್ನು ರಕ್ಷಿಸುವ ಹಾಗೂ ಕಾನೂನಾತ್ಮಕವಾಗಿ ಹಕ್ಕು ಪತ್ರ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು.

**ಧ್ವನಿ: ಮಧು ಬಂಗಾರಪ್ಪ**

**<><*<><>*><>**

ಕಲಬುರಗಿಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ೩೭೧ ಹಾಸಿಗೆ ಸಾಮರ್ಥ್ಯದ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯನ್ನು ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಉದ್ಘಾಟಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದರು. ಜಯದೇವ ಆಸ್ಪತ್ರೆ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ವಿಪಕ್ಷ ನಾಯಕ ಡಾ. ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ೭ ಜಿಲ್ಲೆಯ ಸಚಿವರು, ಶಾಸಕರು ಹಾಗೂ ಇನ್ನಿತರ ಜನಪ್ರತಿನಿಧಿಗಳು ಭಾಗವಹಿಸಲಿದ್ದು, ಎಲ್ಲಿಯೂ ಲೋಪವಾಗದಂತೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾರ್ಯಕ್ರಮಕ್ಕೆ ಸೂಕ್ತ ಪೊಲೀಸ್ ಭದ್ರತೆ ವ್ಯವಸ್ಥೆ ಕಲ್ಪಿಸಬೇಕು. ಸಂಚಾರ ವ್ಯವಸ್ಥೆ ನಿರ್ವಹಣೆ, ಸಾರ್ವಜನಿಕರಿಗೆ ಊಟ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಕಾರ್ಯಕ್ರಮ ವೇದಿಕೆ ಸ್ಥಳದ ಸಮೀಪ ಆಂಬುಲೆನ್ಸ್, ಅಗ್ನಿಶಾಮಕ ವಾಹನ ಇರಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶಿಸಿದರು. ಇದೇ ವೇಳೆ, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಕಲಬುರುಗಿಯ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯ ಸಾಮರ್ಥ್ಯಕ್ಕೆ ತಕ್ಕಂತೆ ಈಗಿರುವ ೧೦ ಹೃದ್ರೋಗ ವೈದ್ಯರ ಜೊತೆಗೆ ಹೆಚ್ಚುವರಿಯಾಗಿ ೨೧ ವೈದ್ಯರು, ೧೨೦ ಸ್ಟಾಫ್ ನರ್ಸ್ ಸೇರಿದಂತೆ ಇತರೆ ಸಿಬ್ಬಂದಿಗಳ ನೇಮಕಾತಿಗೆ ಹಣಕಾಸು ಇಲಾಖೆ ಒಪ್ಪಿಗೆ ನೀಡಿದ್ದು, ಅದರಂತೆ ನೇಮಕಾತಿ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ಟಿ.ಬೇಗೂರು ಬಳಿಯ ರಾಷ್ಟ್ರೀಯ ಹೆದ್ದಾರಿ ೪ರಲ್ಲಿ ಚಾಲಕನ ನಿಯಂತ್ರಣ ತಪ್ಪಿದ ಕಂಟೈನರ್, ಚಲಿಸುತ್ತಿದ್ದ ಕಾರಿನ ಮೇಲೆ ಪಲ್ಟಿಯಾದ ಪರಿಣಾಮ ಕಾರಿನಲ್ಲಿದ್ದ ಎರಡು ಮಕ್ಕಳು ಸೇರಿದಂತೆ ೬ ಮಂದಿ ಮೃತಪಟ್ಟಿದ್ದಾರೆ. ಬೆಂಗಳೂರಿನಿಂದ ತುಮಕೂರಿನ ಮಾರ್ಗವಾಗಿ ಚಲಿಸುತ್ತಿದ್ದ ವೋಲ್ವೊ ಕಾರಿನ ಮೇಲೆ ಕಾರಿನ ಮೇಲೆ ಕಂಟೈನರ್ ವಾಹನ ಬಿದ್ದಿದ್ದರಿಂದ ಕಾರು ಅಪ್ಪಚ್ಚಿಯಾಗಿದ್ದು, ಕಾರಿನೊಳಗಿದ್ದ ೬ ಮಂದಿ ಸಾವನ್ನಪ್ಪಿದ್ದಾರೆ.

<><*<><>*><>

ಬೆಂಗಳೂರು ನಗರದ ಮಹದೇವಪುರ, ರಾಜರಾಜೇಶ್ವರಿ ನಗರ, ದಾಸರಹಳ್ಳಿ ಹಾಗೂ ದಕ್ಷಿಣ ವಲಯಗಳಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಇಂದು ನಡೆಸಲಾಯಿತು. ವಲಯ ಆಯುಕ್ತರು, ವಲಯ ಜಂಟಿ ಆಯುಕ್ತರು ಹಾಗೂ ಮುಖ್ಯ ಅಭಿಯಂತರರ ನೇತೃತ್ವದಲ್ಲಿ ಪಾಲಿಕೆಯ ವಿವಿಧ ಸ್ಥಳಗಳಲ್ಲಿ ಅಂಗಡಿ ಮುಂಗ್ಗಟ್ಟುಗಳು ಹಾಗೂ ಬೀದಿ ಬದಿ ವ್ಯಾಪಾರಿಗಳು, ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು, ನಾಗರಿಕರ ಓಡಾಟಕ್ಕೆ ಸಮಸ್ಯೆಯಾಗುತ್ತಿರುವುದನ್ನು ಗಮನಿಸಿ, ಒತ್ತುವರಿ ತೆರವು ಕಾರ್ಯಾಚರಣೆ ನಡೆಯಿತು.

<><*<><>*><>

ಚಿಕ್ಕಮಗಳೂರು ಕಾಫಿ ಬೆಳೆಗಾರರಿಗೆ ಸರ್ಫೈಸಿ ಕಾಯ್ದೆಯಿಂದ ಉಂಟಾಗಿರುವ ಸಮಸ್ಯೆ ತಪ್ಪಿಸಲು ಸಾಲ ಮರುಪಾವತಿಗಾಗಿ 'ಒಂದು ಬಾರಿ ಪರಿಹಾರ' ಅವಕಾಶವನ್ನು ಕಲ್ಪಿಸಲಾಗಿದೆ ಎಂದು ಭಾರತೀಯ ಕಾಫಿ ಮಂಡಲಿ ಅಧ್ಯಕ್ಷ ಎಂ.ಜೆ.ದಿನೇಶ್ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕೆನರಾ ಬ್ಯಾಂಕ್‌ನಲ್ಲಿ ಸಾಲ ಬಾಕಿ ಇರುವ ಬೆಳೆಗಾರರಿಗೆ ಇದೇ ೨೬, ೨೭ ರಂದು ಅದಾಲತ್ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಕ್ರಿಸ್‌ಮಸ್ ಹಬ್ಬ ಮತ್ತು ಹೊಸ ವರ್ಷದ ಸಂದರ್ಭದಲ್ಲಿ ಪ್ರಯಾಣಿಕರ ದಟ್ಟಣೆಯನ್ನು ನಿಯಂತ್ರಿಸಲು ಹುಬ್ಬಳ್ಳಿ-ಎಸ್‌ಎಂವಿಟಿ ಬೆಂಗಳೂರು ಮತ್ತು ವಾಸ್ಕೋ ಡ ಗಾಮಾ-ಎಸ್‌ಎಂವಿಟಿ ಬೆಂಗಳೂರು ನಿಲ್ದಾಣಗಳ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳು ಸಂಚರಿಸಲಿವೆ ಎಂದು ನೈರುತ್ಯ ರೈಲ್ವೆ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಜುನಾಥ ಕನಮಡಿ ತಿಳಿಸಿದ್ದಾರೆ.

೨. ಬರುವ ಜನವರಿ ೪ ಮತ್ತು ೫ ರಂದು ಎರಡು ದಿನಗಳ ಕಾಲ ಯುವ ಜನಸೇವಾ ಹಾಗೂ ಕ್ರೀಡಾ ಇಲಾಖೆಯಿಂದ ದಾವಣಗೆರೆಯಲ್ಲಿ ರಾಜ್ಯ ಮಟ್ಟದ ಯುವಜನೋತ್ಸವ ಆಯೋಜಿಸಲಾಗಿದೆ.

೩. ಚಿಕ್ಕಬಳ್ಳಾಪುರ ನಗರ ಹೊರವಲಯದ ಚದುಲಪುರ ಬಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಉಚಿತ ಊಟ ವಸತಿ ಸಹಿತ ೧೦ ದಿನಗಳ ಅಣಬೆ ಬೇಸಾಯ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ೯೪೮೨೯೬೮೬೩೮ ಕ್ಕೆ ಕರೆ ಮಾಡಬಹುದು.

೪. ಚಿತ್ರದುರ್ಗ ನಗರದ ಜಿಲ್ಲಾಸ್ಪತ್ರೆಗೆ ಇಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಹಾಗೂ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**